# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 900 (1137)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿರುವ ಗೊಂದಲಗಳ ಕುರಿತು

(ಅ) ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಜ್ಯೇಷ್ಠತಾ ಪಟ್ಟಿಯ ಕುರಿತು ವಿವಿಧ ನ್ಯಾಯಾಲಯಗಳ ಆದೇಶಗಳ ಪ್ರತಿಗಳನ್ನು ಒದಗಿಸಿಕೊಡುವುದು;

(ಆ) ಸದರಿ ಜ್ಯೇಷ್ಠತಾ ಪಟ್ಟಿಯನ್ನು ಕಾನೂನು ರೀತಿಯಲ್ಲಿ ಸರಿಪಡಿಸಲು ಸರ್ಕಾರದ ವಿಳಂಬ ನೀತಿಯ ಕ್ರಮಗಳಿಗೆ ಕಾರಣಗಳೇನು ; (ವಿವರ ನೀಡುವುದು)

(ಇ) ವಿವಿಧ ನ್ಯಾಯಾಲಯಗಳ ಹಂತದಲ್ಲಿ ಸದರಿ ಜ್ಯೇಷ್ಠತಾ ಪಟ್ಟಿಯಲ್ಲಿನ ಗೊಂದಲ ನಿವಾರಿಸಲು ಇಲಾಖೆಯು ಸಮರ್ಪಕ ಕಾನೂನಾತ್ಮಕ ಹೋರಾಟ ನಡೆಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಈ) ಸದರಿ ಜ್ಯೇಷ್ಠತಾ ಪಟ್ಟಿಯಲ್ಲಿನ ಗೊಂದಲದ ಕಾರಣದಿಂದ ನೂರಾರು ಅರ್ಹ ಅಭ್ಯರ್ಥಿಗಳಿಗೆ ಸಕಾಲದಲ್ಲಿ ಪದೋನ್ನತಿ ಪಡೆಯದೆ ಹತಾಶರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)